ಶಿಕ್ಷಣಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳಾಗಿರುತ್ತವೆ. ಇದರಲ್ಲಿ ಕೆಲವು ಕಾರ್ಯಕ್ರಮಗಳಲ್ಲಿ ಶಿಕ್ಷಕೇತರ ನೌಕರರನ್ನು ಸಹ ಸೇರಿಸಿಕೊಳ್ಳಲಾಗುತ್ತಿದೆ. ಆದ್ದರಿಂದ ಈ ಕಾರ್ಯ ವ್ಯಾಪ್ತಿಯಿಂದ ಶಿಕ್ಷಣದ ಮಟ್ಟ ಕುಂದುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬೇರೆ ಇಲಾಖಾ ನೌಕರರನ್ನೂ ಸಹ ಈ ಕಾರ್ಯಕ್ರಮಗಳಲ್ಲಿ ಅಳವಡಿಸಿಕೊಳ್ಳಲಾಗುತ್ತಿದೆ.

ಈ) ಸ್ಕೌಟ್ ಗೈಡ್ ಟ್ರೈನಿಂಗ್, ಡಿಪಿಇಪಿ ತರಬೇತಿ ಈ ಕಾರ್ಯಕ್ರಮಗಳು ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸಲು ಸಹಕಾರಿಯಾಗುತ್ತವೆ.

ಸಂಕೇಶ್ವರದ ಮುರಾರ್ಜಿ ದೇಸಾಯಿ ವಸತಿ ಶಾಲೆ.

2397(2988)

ಶ್ರೀ ಉಮೇಶ್ ವಿಶ್ವನಾಥ ಕತ್ತಿ(ಹುಕ್ಕೇರಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊರಾರ್ಜಿದೇಸಾಯಿ ನಿವಾಸ ವಸತಿ ಶಾಲೆ ಸಂಕೇಶ್ವರ ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಕಟ್ಟಡ ನಿರ್ಮಾಣಕ್ಕಾಗಿ ಇಲ್ಲಿಯವರೆಗೆ ರೂ.48.00 ಲಕ್ಷ ಬಿಡುಗಡೆಯಾಗಿದ್ದು ಸದರಿ ಕೆಲಸವು ಭೂಸೇನಾ ನಿಗಮದ ವತಿಯಿಂದ ಕಟ್ಟಡ ನಿರ್ವಹಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದ್ದು, ಆದರೆ ಸದರಿ ಸ್ಥಳದಲ್ಲಿ ಕಟ್ಟಡದ ನಿರ್ಮಾಣ ಕಾರ್ಯವನ್ನು ಇನ್ನೂ ಏಕೆ ಪ್ರಾರಂಭಿಸಿಲ್ಲ ಮತ್ತು ಕಾಮಗಾರಿ ಕೆಲಸ ಯಾವಾಗ ಪ್ರಾರಂಭವಾಗುತ್ತದೆ ಹಾಗೂ ಕೆಲಸ ಮುಗಿಯಲು ಎಷ್ಟು ಅವಧಿ ಬೇಕಾಗುತ್ತದೆ.

ಆ) ಬೆಳಗಾವಿ ಜಿಲ್ಲೆ, ಬೆಳಗಾವಿ ಮಣ್ಣೂರಿನಲ್ಲಿ ಜಿಲ್ಲಾ ಶಿಕ್ಷಕರ ತರಬೇತಿ ಸಂಸ್ಥೆ ಕಟ್ಟಡ ಕೆಲಸವು ಅಪೂರ್ಣವಾಗಿದ್ದು ಅಲ್ಲಿಯ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳಿಲ್ಲದೆ ಕಟ್ಟಡವನ್ನು ಹಸ್ತಾಂತರಿಸುವುದಾಗಿ ತಿಳಿದು ಬಂದಿದೆ. ಅಪೂರ್ಣವಾದ ಕಟ್ಟಡವನ್ನು ಹಸ್ತಾಂತರ ಮಾಡಿಕೊಂಡಿದ್ದೇಕೆ? ಕಳಪೆ ಕಾಮಗಾರಿ ಬಗ್ಗೆ ಸರ್ಕಾರವಾಗಲೀ ಅಥವಾ ಸಂಬಂಧಿಸಿದ ಅಧಿಕಾರಿಗಳಾಗಲೀ ಗಮನಹರಿಸಿ ತೆಗೆದುಕೊಂಡ ಕ್ರಮವೇನು?

ಶ್ರೀ ಎಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಈ ಕಟ್ಟಡಕ್ಕೆ ರೂ.67.00 ಲಕ್ಷದ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಇಡಿ:7:ಯೋಯೋಕ 2000) ದಿನಾಂಕ 28.01.2001ರಲ್ಲಿ ನೀಡಿ ರೂ.48.44 ಲಕ್ಷಗಳನ್ನು ಕರ್ನಾಟಕ ಭೂಸೇನಾ ನಿಗಮಕ್ಕೆ ಮಂಜೂರು ಮಾಡಿದೆ.

ಈ ಕಟ್ಟಡದ ನಿವೇಶನದ ಚೆಕ್‌ಬಂದಿ ಗುರುತಿಸುವ ಕಾರ್ಯ ಮತ್ತು ಇತರೆ ಔಪಚಾರಿಕ ಕ್ರಮವು ನಡೆಯುತ್ತಿದ್ದು ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿದೆ. ಈ ಔಪಚಾರಿಕ ಕ್ರಮವು ಮುಗಿದು ನಿವೇಶನವನ್ನು ನಿರ್ಮಾಣ ಸಂಸ್ಥೆಗೆ ಹಸ್ತಾಂತರಿಸಿದ ಬಳಿಕ ಒಂದು ವರ್ಷದೊಳಗಾಗಿ ಕಟ್ಟಡ ನಿರ್ಮಾಣ ಕಾರ್ಯವು ಪೂರ್ಣಗೊಳ್ಳುವ ನಿರೀಕ್ಷೆಯಿದೆ.

ಆ) ಕಟ್ಟಡವು ಕಳೆದ ಹಾಲ್ಕು ವರ್ಷಗಳಿಂದ ಉಪಯೋಗಕ್ಕೆ ಬಾರದೇ ಉಳಿದಿದ್ದರಿಂದ ಮತ್ತು ಕಟ್ಟಡ ಹಾಳಾಗುವುದನ್ನು ತಡೆಗಟ್ಟಲು ಕಟ್ಟಡವನ್ನು ಹಸ್ತಾಂತರಿಸಿಕೊಂಡು ಡಯಟ್‌ನ್ನು ಈ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಈ ಕಟ್ಟಡಕ್ಕೆ ನೀರಿನ ಸೌಲಭ್ಯ ಒದಗಿಸಿದ್ದು, ವಿದ್ಯುತ್ ಸಂಪರ್ಕವನ್ನು ಇನ್ನೂ ಕಲ್ಪಿಸಿರುವುದಿಲ್ಲ. ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಕಳಪೆ ಕಾಮಗಾರಿಯ ಬಗ್ಗೆ ಈವರೆಗೆ ಸಂಬಂಧಪಟ್ಟ ಪ್ರಾಂಶುಪಾಲರಿಂದ ಯಾವುದೇ ವರದಿ ಬಂದಿರುವುದಿಲ್ಲ. ಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಶಿಕ್ಷಣ ಇಲಾಖೆಯಲ್ಲಿ ಲಿಪಿಕ ಸಿಬ್ಬಂದಿಗಳ ಬಡ್ತಿ.

2398(2989)

ಶ್ರೀ ಉಮೇಶ್ ವಿಶ್ವನಾಥ ಕತ್ತಿ(ಹುಕ್ಕೇರಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1990ರಿಂದ ಕಳೆದ ೨ ವರ್ಷಗಳಲ್ಲಿ ಶಿಕ್ಷಣ ಇಲಾಖೆಯಲ್ಲಿ ಲಿಪಿಕ ಸಿಬ್ಬಂದಿಗಳಿಗೆ ಪ್ರತಿ ವರ್ಷ ಎಷ್ಟು ಸಿಬ್ಬಂದಿಗಳಿಗೆ ಬಡ್ತಿ ನೀಡಲಾಗಿದೆ.

ಆ) ದ್ವಿತೀಯ ದರ್ಜೆ ಸಹಾಯಕ ಬೆರಳಚ್ಚುಗಾರ ಹಾಗೂ ಜವಾನ ಹುದ್ದೆಗಳಿಗೆ ಮುಂದಿನ ಹುದ್ದೆಗೆ ಪ್ರತಿ ವರ್ಷ ಎಷ್ಟು ಸಿಬ್ಬಂದಿಗಳಿಗೆ ಬಡ್ತಿ ನೀಡಲಾಗಿದೆ.

ಇ) ದ್ವಿತೀಯ ದರ್ಜೆ ಸಹಾಯಕ ಬೆರಳಚ್ಚುಗಾರ ಹಾಗೂ ಪ್ರಥಮ ದರ್ಜೆ ಸಹಾಯಕ ಮತ್ತು ಜವಾನ ಹುದ್ದೆಗಳು ರಾಜ್ಯದಲ್ಲಿ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ?